ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ

ನಂ. 09, 2ನೇ ಮಹಡಿ, 1ನೇ ಮುಖ್ಯರಸ್ತೆ, (ಹೊರವರ್ತುಲ ರಸ್ತೆ),ಕೆಂಗೇರಿ ಉಪನಗರ,ಬೆಂಗಳೂರು-60.

**ಸಂಖ್ಯೆ : ಸ.ಇಂ/ವಾ-130/ವಾರ್ಡ್‌ಸಭೆ/2020-21** **ದಿನಾಂಕ : 21/11/2020**

## ವಾರ್ಡ್-130ರ ವಾರ್ಡ್ ಸಭೆಯ ನಡವಳಿ.

**ದಿನಾಂಕ: 21/11/2020 ರಂದು ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿಯ ನಡುವಳಿಗಳು**

**ಸಭೆಯಲ್ಲಿ ಹಾಜರಿದ್ದ ಅಧಿಕಾರಿ ನೌಕರರು ಮತ್ತು ಸದಸ್ಯರುಗಳು:**

| ಕ್ರ ಸಂ | ಸದಸ್ಯರ ಹೆಸರು/ಪದನಾಮ | ಪದನಾಮ |
|---|---|---|
| 1 | ಶ್ರೀ ಮುತ್ತುರಾಜ್ | ಮುಖ್ಯ ಲೆಕ್ಕ ಪರಿಶೋಧನಾಧಿಕಾರಿಗಳು ನೋಡಲ್ ಅಧಿಕಾರಿ |
| 2 | ಶ್ರೀ ಶ್ರೀಧರ್.ಸಿ | ಸಹಾಯಕ ಇಂಜಿನಿಯರ್ ವಾರ್ಡ್-130 ಹಾಗೂ ಸದಸ್ಯ ಕಾರ್ಯದರ್ಶಿ |
| 3 | ಶ್ರೀ ಡಿ.ವಿನಯ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 4 | ಶ್ರೀ ಗವಿಸಿದ್ದಯ್ಯ | ಕಿರಿಯ ಅಭಿಯಂತರರು (ಎಲೆಕ್ಟ್ರಿಕಲ್, ರಾರಾನಗರ) |
| 5 | ಶ್ರೀ ನಾಗರಾಜ.ಎಲ್ | ಹಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀ ತಿಪ್ಪೇಸ್ವಾಮಿ ಬಿ.ಎಸ್ | ಗುತ್ತಿಗೆದಾರರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 7 | ಶ್ರೀ ಶಬರಿನಾಥ್ | ಗುತ್ತಿಗೆದಾರರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 8 | ಶ್ರೀ ನಿರಂಜನ್ ಬಿ.ಎಸ್ | ವಾರ್ಡ್ ಮಾರ್ಷಲ್ |
| 9 | ಡಾ॥ ಅನುಪಮ | ಪ್ರಾಥಮಿಕ ಆರೋಗ್ಯ ಕೇಂದ್ರ, ಉಲ್ಲಾಳ |
| 10 | ವಾರ್ಡ್ ಕಮಿಟಿ ಸದಸ್ಯರುಗಳು | ವಾರ್ಡ್-130 |

ವಾರ್ಡ್ ನಂ.130 ಉಲ್ಲಾಳ ವಾರ್ಡ್‌ನ ಸಹಾಯಕ ಇಂಜಿನಿಯರ್ ಹಾಗೂ ಸದಸ್ಯ ಕಾರ್ಯದರ್ಶಿಯವರು ಸಭೆಯಲ್ಲಿ ಹಾಜರಿದ್ದ ಅಧಿಕಾರಿ ನೌಕರರು ಮತ್ತು ವಾರ್ಡ್ ಕಮಿಟಿ ಸದಸ್ಯರನ್ನು ಸ್ವಾಗತಿಸಿದರು.

ನೋಡಲ್ ಅಧಿಕಾರಿಗಳು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ವಾರ್ಡಿನ ವ್ಯಾಪ್ತಿಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸಭೆಯಲ್ಲಿ ಹಾಜರಿದ್ದ ನೌಕರರು ಮತ್ತು ವಾರ್ಡ್ ಕಮಿಟಿ ಸದಸ್ಯರುಗಳಿಂದ ಮಾಹಿತಿ ಪಡೆದರು.

ಸಭೆಯಲ್ಲಿ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಿದರು.

1) ಸಭೆಯಲ್ಲಿ ಹಾಜಜರಿದ್ದ ವಾರ್ಡ್ ಕಮಿಟಿ ಸದಸ್ಯರಾದ ಶ್ರೀ ಅನಿಲ್ ಕುಮಾರ್‌ರವರು ಡಾ॥ ಅನುಪಮ ಅವರು ಆರೋಗ್ಯ ಕೇಂದ್ರಕ್ಕೆ ಪ್ರತಿನಿತ್ಯ ಹಾಜರಾಗದೇ ಇರುವ ಬಗ್ಗೆ ಸಭೆಯ ಗಮನಕ್ಕೆ ತಂದು, ಅವರು ಪ್ರತಿನಿತ್ಯ ಆರೋಗ್ಯ ಕೇಂದ್ರಕ್ಕೆ ಹಾಜರಾಗಲು ಸೂಚಿಸುವಂತೆ ಕೋರಿರುತ್ತಾರೆ. (ಕ್ರಮ:– ಆರೋಗ್ಯ ವೈಧ್ಯಾಧಿಕಾರಿ).

2) ಜ್ಞಾನಭಾರತಿ ಬಡಾವಣೆ 1ನೇ ಬ್ಲಾಕ್‌ನಲ್ಲಿ ಕಾವೇರಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಲಾಯಿತು (ಕ್ರಮ:– ಸಹಾಯಕ ಇಂಜಿನಿಯರ್, ಬಿ.ಡಬ್ಲೂ.ಎಸ್.ಎಸ್.ಬಿ).

3) ಬೀದಿ ದೀಪಗಳ ನಿರ್ವಹಣೆಯನ್ನು, ನಿಗಧಿತ ಸಮಯದಲ್ಲಿ ಆನ್ ಆಗಿ, ನಿಗಧಿತ ಸಮಯದಲ್ಲಿ ಸ್ವಚ್ ಆಫ್ ಆಗಲು ಅನುವಾಗುವಂತೆ ಟೈಮರ್‌ಗಳನ್ನು ಅಳವಡಿಸಲು ಕ್ರಮಹಿಸಲು ತಿಳಿಸಿದರು (ಕ್ರಮ:– ಸಹಾಯಕ ಇಂಜಿನಿಯರ್, ವಿದ್ಯುತ್ ವಿಭಾಗ).

4) ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ರಸ್ತೆಗಳನ್ನು ಸ್ವಚ್ಚವಾಗಿಡಲು ಕ್ರಮ ವಹಿಸುವಂತೆ ಹಾಗೂ ದಿನನಿತ್ಯ ರಸ್ತೆ ಕಸ ಗುಡಿಸಲು ಅಗತ್ಯ ಕ್ರಮ ತೆಗೆದುಕೊಳ್ಳುವಂತೆ ತಿಳಿಸಿದರು (ಕ್ರಮ:– ಕಿರಿಯ ಆರೋಗ್ಯ ಪರಿವೀಕ್ಷಕರು).

5) ವಾರ್ಡ್ ವ್ಯಾಪ್ತಿಯಲ್ಲಿ ಪ್ರಗತಿಯಲ್ಲಿರುವ ಕಾಮಗಾರಿಗಳ ಗುಣಮಟ್ಟ ಕಾಯ್ದುಕೊಂಡು ಕೆಲಸ ನಿರ್ವಹಿಸಸಲು ಸೂಚಿಸುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ರಸ್ತೆಗಳಲ್ಲಿ ಗುಂಡಿ ಮುಚ್ಚಲು ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು (ಕ್ರಮ:– ವಾರ್ಡ್ ಇಂಜಿನಿಯರ್).

6) ದೇವರಾಜ ಅರಸ್ ಬಡಾವಣೆ, ನಾಗದೇವನಹಳ್ಳಿ ಭೂತಪ್ಪ ದೇವಸ್ಥಾನದ ಹತ್ತಿರ ಮತ್ತು ದೊಡ್ಡ ಗೊಲ್ಲರಹಟಿಯಲ್ಲಿ, ನೀರಿನ ಸಮಸ್ಯೆ ಇದ್ದು, ಇದನ್ನು ಪರಿಹರಿಸಲು ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು (ಕ್ರಮ:– ಸಹಾಯಕ ಇಂಜಿನಿಯರ್, ಬಿ.ಡಬ್ಲೂ.ಎಸ್.ಎಸ್.ಬಿ).

7) ಉಲ್ಲಾಳ ವಾರ್ಡ್‌ನ ಶಿರ್ಕೆ ಅಪಾರ್ಟ್‌ಮೆಂಟ್ ಮುಂಭಾಗ ರಿಂಗ್ ರಸ್ತೆಯಲ್ಲಿ ರೋಡ್ ಹಂಪ್ಸ್ ಮತ್ತು ರಸ್ತೆ ವಿಭಜಕಗಳನ್ನು ಅಳವಡಿಸುವಂತೆ ಕೋರಿ, ಪಾಲಿಕೆಯ ಟ್ರ್ಯಾಫಿಕ್ ಇಂಜಿನಿಯರ್

ಸೆಲ್ ವಿಭಾಗಕ್ಕೆ ತಿಳಿಸುವಂತೆ ಸಭೆಯಲ್ಲಿ ಹಾಜರಿದ್ದ ವಾರ್ಡ್ ಇಂಜಿನಿಯರ್‌ರವರಿಗೆ ತಿಳಿಸಲಾಯಿತು (ಕ್ರಮ:- ಟ್ರಾಫಿಕ್ ಇಂಜಿಯನಿರ್ ಸೆಲ್).

8) ಜ್ಞಾನಭಾರತಿ ಬಡಾವಣೆಯ ಮೊದಲನೇ ಬ್ಲಾಕ್‌ನಲ್ಲಿರುವ ಒಳ ಚರಂಡಿ ಸಮಸ್ಯೆಗಳನ್ನು ಪರಿಹರಿಸುವಂತೆ ಸಭೆಯಲ್ಲಿ ಹಾಜರಿದ್ದ ಶ್ರೀ ಸತ್ಯನಾರಾಯಣ, ವಾರ್ಡ್ ಕಮಿಟಿ ಸದಸ್ಯರು ತಿಳಿಸಿದ ಮೇರೆಗೆ ಅಗತ್ಯ ಕ್ರಮವಹಿಸುವಂತೆ ತಿಳಿಸಲಾಯಿತು (ಕ್ರಮ:- ಸಹಾಯಕ ಇಂಜಿನಿಯರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ).

9) ಜ್ಞಾನಭಾರತಿ ಬಡಾವಣೆಯ ಮೊದಲನೇ ಬ್ಲಾಕ್‌ನಲ್ಲಿ ಬೀದಿ ದೀಪಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸಲು ಸೂಚಿಸಲಾಯಿತು (ಕ್ರಮ:- ಕಿರಿಯ ಇಂಜಿನಿಯರ್, ವಿದ್ಯುತ್).

10) ಪಾಲಿಕೆಯ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖೆಯವರು ರಸ್ತೆ ಬದಿಯ ಮರಗಳನ್ನು ಟ್ರಿಮ್ ಮಾಡುತ್ತಿದ್ದು, ಮರದ ರೆಂಬೆಗಳನ್ನು ಸಾಗಿಸದೇ ರಸ್ತೆ ಬದಿಯಲ್ಲೇ ಬಿಡುವುದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವುದಾಗಿ ದೂರುಗಳು ಬರುತ್ತಿರುವುದರಿಂದ ಕತ್ತರಿಸಿದ ಕೊಂಬೆಗಳನ್ನು ತಕ್ಷಣವೇ ತೆರವುಗೊಳಿಸುವಂತೆ ಸೂಚಿಸಲಾಯಿತು (ಕ್ರಮ:- ಇಂಜಿನಿಯರ್, ಬೆಸ್ಕಾಂ).

ಅಂತಿಮವಾಗಿ ವಾರ್ಡ್‌ನ ಎಲ್ಲಾ ವಾರ್ಡ್ ಕಮಿಟಿಯ ಸದಸ್ಯರಗಳು ಮತ್ತು ವಿವಿಧ ಸಂಘ ಸಂಸ್ಥೆಗಳು ಜೊತೆಗೂಡಿ ಸಮನ್ವಯ ಸಾಧಿಸಿ ಕುಂದು ಕೊರತೆಗಳನ್ನು ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಎಲ್ಲಾ ಅಧಿಕಾರಿ ವರ್ಗದವರಿಗೆ ಸೂಚಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಮುತ್ತುರಾಜ್)
ಮುಖ್ಯ ಲೆಕ್ಕ ಪರಿಶೋಧನಾಧಿಕಾರಿಗಳು
ಹಾಗೂ ನೋಡಲ್ ಅಧಿಕಾರಿ,
ವಾರ್ಡ್‌ನಂ.130, ಉಲ್ಲಾಳ
ಕೆಂಗೇರಿ ಉಪ ವಿಭಾಗ
ಬಿ.ಬಿ.ಎಂ.ಪಿ.,ಬೆಂಗಳೂರು.

<u>ಪ್ರತಿಯನ್ನು:</u>

1) ವಲಯ ಆಯುಕ್ತರು ಹಾಗೂ ವಿಶೇಷ ಆಯುಕ್ತರು(ಆಡಳಿತ) ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ತರಲು ಅವರ ಆಪ್ತ ಸಹಾಯಕರಿಗೆ ಸಲ್ಲಿಸಿದೆ.
2) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು, ಕೆಂಗೇರಿ ವಿಭಾಗ ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆಂ.ಉ.ವಿ/ ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ(ಯಶವಂತಪುರ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಎಲ್ಲಾ ವಾರ್ಡ್ ಕಮಿಟಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
7) ಕಛೇರಿ ಪ್ರತಿ